# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1161
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 20.12.2018.
ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹೈದರಾಬಾದ್-ಕರ್ನಾಟಕ ಪ್ರದೇಶವು ಶೈಕ್ಷಣಿಕವಾಗಿ ಹಿಂದುಳಿದಿದ್ದು, ಈ ಭಾಗದಲ್ಲಿನ ಅನೇಕ ಖಾಸಗಿ ಅನುದಾನಿತ ಶಾಲೆಗಳಲ್ಲಿ ಬೋಧಕ-ಬೋಧಕೇತರ ಹುದ್ದೆಗಳು ಖಾಲಿ ಇರುವುದರಿಂದ ಅವುಗಳನ್ನು ಭರ್ತಿ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಭರ್ತಿ ಮಾಡಲು ಸರ್ಕಾರದ ಕ್ರಮಗಳೇನು; | ಹೌದು<br>ದಿನಾಂಕ:31/12/2015ರವರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ನಿಧನ, ನಿವೃತ್ತ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ ಮತ್ತು ಬೋಧಕೇತರ (ದ್ವಿ.ದ.ಸ) ಹುದ್ದೆಯನ್ನು ಭರ್ತಿಮಾಡಲು ಆರ್ಥಿಕ ಮಿತವ್ಯಯ ಜಾರಿಯಲ್ಲಿ ಇರುತ್ತದೆ, ಬೋಧಕೇತರ (ಗ್ರೂಪ್-ಡಿ) ಸೇವೆಯನ್ನು ಹೊರಗುತ್ತಿಗೆ ಮೂಲಕ ಪಡೆಯಲು ಅವಕಾಶ ಕಲ್ಪಿಸಿದೆ. |
| ಆ) | ಹೈದರಾಬಾದ್-ಕರ್ನಾಟಕ ಪ್ರದೇಶದ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಕರ್ನಾಟಕ ಸರ್ಕಾರ ದಿನಾಂಕ : 21/06/2018ರಂದು ಹೊರಡಿಸಿರುವ ಸುತ್ತೋಲೆ ಕ್ರ ಸಂ. 9ರ ಅಂಶಗಳನ್ನು ಕಟ್ಟುನಿಟ್ಟಾಗಿ ಯಾವಾಗ ಜಾರಿಗೆ ತರಲಾಗುವುದು? | ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 39 ಹೈಕಕೋ 2018 ದಿನಾಂಕ:21.06.2018ರಲ್ಲಿ ನೇಮಕಾತಿ ವಿಧಾನಗಳನ್ನು ಅನುಸರಿಸಲು ಎಲ್ಲಾ ಇಲಾಖಾ ಮುಖ್ಯಸ್ಥರು, ಪ್ರಾದೇಶಿಕ ಆಯುಕ್ತರು, ಎಲ್ಲಾ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರಗಳಿಗೆ ಚಾಚುತಪ್ಪದೆ ಅನುಸರಿಸುವಂತೆ ಸೂಚಿಸಲಾಗಿರುತ್ತದೆ. |

(ಹೆಚ್. ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ

ಸಂಖ್ಯೆ: ಇಡಿ 710 ಎಸ್‌ಇಎಸ್ 2018)

ಅನುಬಂಧ-1

| ವೃಂದ | ಹುದ್ದೆಗಳ ಸಂಖ್ಯೆ | ಷರಾ |
|---|---|---|
| 1) ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ಜರುಗಿಸಲಾಗಿರುವ 501 ಹುದ್ದೆಗಳು. | | |
| ಬಿ | 501 | ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಆರ್ಥಿಕ ಮಿತವ್ಯಯ ಸಡಿಲಿಕೆಯಾಗಿರುವ ರಾಜ್ಯ ಮಟ್ಟಕ್ಕೆ ಮೀಸಲಿಟ್ಟಿರುವ ಹುದ್ದೆಗಳು ಮತ್ತು ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಖಾಲಿ ಹುದ್ದೆಗಳನ್ನು ಒಳಗೊಂಡಂತೆ 501 ಗ್ರೂಪ್-ಬಿ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 01 ಆರ್‌ಟಿಬಿ-2/2016 ದಿ: 17-12-2016 ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು, ಆದರೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ಎಐಸಿಟಿಇ ನಿಯಮಾವಳಿಗಳನ್ವಯ ವಿದ್ಯಾರ್ಹತೆಯನ್ನು ತಿದ್ದುಪಡಿ ತರಬೇಕಾದ ಹಿನ್ನಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 196 ಡಿಟಿಇ 2016 ದಿ: 08-05-2017ರ ಪತ್ರದಲ್ಲಿ ನೇರ ನೇಮಕಾತಿ ಪ್ರಕ್ರಿಯೆಯನ್ನು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತಂದನಂತರ ಮುಂದುವರಿಸಲು ಸೂಚಿಸಲಾಗಿರುತ್ತದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ತಿದ್ದುಪಡಿಯಾದ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು. |

ನಿರ್ದೇಶಕರು